# ಕರ್ನಾಟಕ ಸರ್ಕಾರ

ಸಂಖ್ಯೆ: ಹೆಚ್‌ಡಿ 87 ಪಿಸಿಇ 2024

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ 14.07.2024.

## ಅಧಿಸೂಚನೆ

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆ ವಿಷಯದಲ್ಲಿ ಆರೋಪಗಳು ಸರ್ಕಾರದ ಗಮನಕ್ಕೆ ಬಂದಿರುವುದಲ್ಲದೆ, ಈ ಕುರಿತು ದಿನ ಪತ್ರಿಕೆಗಳಲ್ಲಿ ಹಾಗೂ ಮಾಧ್ಯಮಗಳಲ್ಲಿಯೂ ಸಹ ವರದಿಯಾಗಿರುತ್ತದೆ. ಈ ಪ್ರಕರಣದಲ್ಲಿ ವಿಚಾರಣೆ ನಡೆಸುವುದು ಸೂಕ್ತವೆಂದು ಮನಗಂಡು, Commission of Inquiry Act, 1952ರ ನಿಯಮ 3 ರ ಉಪನಿಯಮ (1) ರನ್ವಯ ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಿಂದ ವಿಚಾರಣೆ ನಡೆಸಲು ವಿಚಾರಣಾ ಆಯೋಗವನ್ನು ರಚಿಸಲು ಸರ್ಕಾರವು ತೀರ್ಮಾನಿಸಿದೆ.

ಈ ಹಿನ್ನಲೆಯಲ್ಲಿ, ಆರೋಪಗಳ ಬಗ್ಗೆ ವಿಚಾರಣೆಯನ್ನು ನಡೆಸಲು Commission of Inquiry Act, 1952ರ ನಿಯಮ 3ರ ಉಪನಿಯಮ (1)ರನ್ವಯ ಪ್ರದತ್ತವಾದ ಅಧಿಕಾರದನ್ವಯ ಸರ್ಕಾರವು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ **ಶ್ರೀ ಪಿ.ಎನ್.ದೇಸಾಯಿ,** ರವರ ನೇತೃತ್ವದಲ್ಲಿ ಏಕ ಸದಸ್ಯ ವಿಚಾರಣಾ ಆಯೋಗವನ್ನು ರಚಿಸಿದೆ.

ಸದರಿ ವಿಚಾರಣಾ ಆಯೋಗವು Commissions of Inquiry Act, 1952 ಹಾಗೂ Code of Civl Procedure ರಲ್ಲಿನ ಅವಕಾಶದಡಿ ವಿಚಾರಣೆ ನಡೆಸಲು ಎಲ್ಲಾ ಅಧಿಕಾರವನ್ನು ಹೊಂದಿರುತ್ತದೆ ಹಾಗೂ ತನಿಖೆಯನ್ನು 06 ತಿಂಗಳೊಳಗಾಗಿ ಪೂರ್ಣಗೊಳಿಸಿ ವರದಿಯನ್ನು ಸಲ್ಲಿಸತಕ್ಕದ್ದೆಂದು ಸರ್ಕಾರವು ಅಪೇಕ್ಷಿಸುತ್ತದೆ. ವಿಚಾರಣಾ ಆಯೋಗದ Terms of Reference ಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಈ ವಿಚಾರಣಾ ಆಯೋಗಕ್ಕೆ ಸಮಗ್ರ ಮಾಹಿತಿ/ದಾಖಲೆಗಳನ್ನು ಒದಗಿಸಿ ಆಯೋಗವು ವಿಚಾರಣೆಯನ್ನು ಪೂರ್ಣಗೊಳಿಸಲು ಹಾಗೂ ತಾಂತ್ರಿಕ ಸಲಹೆಗಾರರು/ಆರ್ಥಿಕ ಸಲಹೆಗಾರರು/ ಆಡಳಿತಾತ್ಮಕ ಸಲಹೆಗಾರರನ್ನು ಒದಗಿಸಲು ನಗರಾಭಿವೃದ್ಧಿ ಇಲಾಖೆ ಹಾಗೂ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವು ಸಹಕರಿಸತಕ್ಕದ್ದು.

ವಿಚಾರಣೆ ಆಯೋಗಕ್ಕೆ ಸಂಬಂಧಪಟ್ಟಂತೆ ನಗರಾಭಿವೃದ್ಧಿ ಇಲಾಖೆಯ ಮತ್ತು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು ಆಯೋಗವು ಕಾಲಾನುಕಾಲಕ್ಕೆ ವಿಚಾರಣೆಗಾಗಿ ಅಪೇಕ್ಷಿಸುವ ಎಲ್ಲಾ ಕಡತಗಳು/ ದಾಖಲಾತಿಗಳು/ ಇತ್ಯಾದಿಗಳನ್ನು ಒದಗಿಸತಕ್ಕದ್ದು ಹಾಗೂ ವಿಚಾರಣೆ ಸಂದರ್ಭದಲ್ಲಿ ಹಾಜರಿದ್ದು, ವಿಚಾರಣಾ ಆಯೋಗದೊಂದಿಗೆ ಸಂಪೂರ್ಣವಾಗಿ ಸಹಕರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ನಾಗರಾಜು ಎಸ್.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಡಾಳಿತ ಇಲಾಖೆ (ಕಾನೂನು ಮತ್ತು ಸುವ್ಯವಸ್ಥೆ)

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು (ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಒದಗಿಸುವಂತೆ ಕೋರಿದೆ)

**ಪ್ರತಿ:**

1. ಗೌರವಾನ್ವಿತ ಶ್ರೀ ಪಿ.ಎನ್. ದೇಸಾಯಿ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರು, ಅಪರ್ಣ ಎಲಿನ ಅಪಾರ್ಟಮೆಂಟ್, 1603, ವಿಂಗ್-ಎ, ಯಶವಂತಪುರ ರೈಲ್ವೆ ನಿಲ್ದಾಣದ ಹತ್ತಿರ, ತುಮಕೂರು ರಸ್ತೆ, ಯಶವಂತಪುರ, ಬೆಂಗಳೂರು-560022.

2. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ನಂ.5329, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ಬೆಂಗಳೂರು.
4. ರಿಜಿಸ್ಟ್ರಾರ್ ಜನರಲ್, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಮತ್ತು ನಗರ ಮತ್ತು ಗ್ರಾಮಾಂತರ ಯೋಜನೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು.
10. ಮಾನ್ಯ ಮುಖ್ಯಮಂತ್ರಿರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
11. ಮಾನ್ಯ ಗೃಹ ಸಚಿವರ ಆಪ್ತ ಕಾರ್ಯದರ್ಶಿರವರು, ವಿಧಾನಸೌಧ, ಬೆಂಗಳೂರು.
12. ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿರವರು, ವಿಧಾನಸೌಧ, ಬೆಂಗಳೂರು.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು